ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಜೂನ್ 1,2020**

# ಪತ್ರಿಕಾ ಪ್ರಕಟಣೆ

## ಪ್ರಧಾನ ಮಂತ್ರಿ ನರೇಂದ್ರ ಮೋದಿ ದೇಶ ಕಟ್ಟುವ ಕಾಯಕಕ್ಕೆ ಅರ್ಪಿಸಿಕೊಂಡವರು

-ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ

**ಬೆಂಗಳೂರು, ಜೂನ್ 1, 2020 (ಕರ್ನಾಟಕ ವಾರ್ತೆ):**

ಕೇಂದ್ರದಲ್ಲಿ ದ್ವಿತೀಯ ಅವಧಿಯ ಪ್ರಥಮ ವರ್ಷ ಪೂರೈಸಿದ ಸರ್ಕಾರ ಹಾಗೂ ಅದ್ವಿತಿಯ ಸಾಧಕ ಪ್ರಧಾನ ಮಂತ್ರಿ ನರೇಂದ್ರ ಮೋದಿ ಜೀ ಯವರ ಸಾಧನೆಯ ಬಗ್ಗೆ ದೇಶದ ಜನರಿಂದ ಹಿಡಿದು ವಿಶ್ವದ ಅನೇಕ ದೇಶಗಳ ನಾಯಕರು ಮೆಚ್ಚಿಕೊಂಡಿದ್ದಾರೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ತಿಳಿಸಿದರು.

ಕೇಂದ್ರ ಸರ್ಕಾರದ ಪ್ರಥಮ ವರ್ಷಾಚರಣೆಯ ಅಂಗವಾಗಿ ವಿಧಾನಸೌಧದಲ್ಲಿಂದು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ದೇಶ ಕಟ್ಟುವ ಕಾಯಕಕ್ಕೆ ತನ್ನನ್ನು ತಾನೇ ಅರ್ಪಿಸಿಕೊಂಡ ವ್ಯಕ್ತಿತ್ವದ ಪ್ರಧಾನಿ ನರೇಂದ್ರ ಮೋದಿ ಜೀ. ಹಲವು ದಶಕಗಳಿಂದ ತುಕ್ಕು ಹಿಡಿದಿದ್ದ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ತಂದವರು. ಆಡಳಿತದಲ್ಲಿ ಸುಧಾರಣೆ ತರಲು ಭ್ರಷ್ಟಾಚಾರಕ್ಕೆ ಕಡಿವಾಣ, ಕರ್ತವ್ಯ ನಿಷ್ಠೆ, ತಂತ್ರಜ್ಞಾನ ಅಳವಡಿಕೆ, ಪಾರದರ್ಶಕತೆ, ದೇಶದ ಸರಂಕ್ಷಣೆಗೆ ಆದ್ಯತೆ ಇವುಗಳನ್ನು ಅಳವಡಿಸಿಕೊಂಡು ಕಾಯಕ ಯೋಗಿಯಾಗಿ ಆಡಳಿತ ನಡೆಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಜೀ ಯವರು. ಪ್ರಥಮ ಬಾರಿಗೆ ಪ್ರಧಾನಿಯಾಗಿ ಪ್ರಮಾಣವಚನ ಪಡೆಯುವುದಕ್ಕೆ ಮೊದಲು ಸಂಸತ್ತಿನ ಭವನಕ್ಕೆ ನಮನ ಮಾಡಿ ಸಂವಿಧಾನವನ್ನು ಎತ್ತಿ ಹಿಡಿಯುವ ಸಂಕಲ್ಪ ಮಾಡಿದರು ಎಂದು ಹೇಳಿದರು.

ಮೊದಲನೆಯ ಸಂಸದರ ಸಭೆಯಲ್ಲಿ ಮೋದಿಯವರು ಭಾಷಣ ಮಾಡಿ ಮುಂದಿನ ಚುನಾವಣೆ ನನ್ನ ಸರ್ಕಾರದ ಸಾಧನೆಯ ಆಧಾರದಲ್ಲಿ ನಡೆಯಲಿದೆ ಎಂದು ಘೋಷಿಸಿದರು. ಅದರಂತೆ 5 ವರ್ಷದ ಆಡಳಿತದಲ್ಲಿ ನುಡಿದಂತೆ ನಡೆದು ದೇಶದ ಸರ್ವತೋಮುಖ ಅಭಿವೃದ್ಧಿಗೆ ಹಲವಾರು ಕಾರ್ಯಕ್ರಮಗಳನ್ನು ಜನತೆಗೆ ನೀಡಿದವರು ಪ್ರಧಾನಿ ನರೇಂದ್ರ

ಮೋದಿ ಜೀ ಯವರು.ವರ್ಷದ ಆಡಳಿತದಲ್ಲಿ ಜನಧನ್ ಯೋಜನೆ, ಆಯುಷ್ಮಾನ್ ಭಾರತ್, ಜನರಿಕ್ ಔಷಧಿ ಮಳಿಗೆ, ಬೇವು ಮಿಶ್ರಿತ ರಸಗೊಬ್ಬರ ಬಳಕೆ, ಮುದ್ರಾ ಯೋಜನೆ, ಸ್ಟಾರ್ಟ್ ಆಫ್ ಇಂಡಿಯಾ, ಇತ್ಯಾದಿ ಹಲವಾರು ದೇಶದ ಅಭಿವೃದ್ಧಿಗೆ ಕಾರ್ಯಕ್ರಮಗಳನ್ನು ರೂಪಿಸಿದ ಸಾಧನೆಯನ್ನು ದೇಶದ **130** ಕೋಟಿ ಜನರ ಮುಂದೆ **2019** ಲೋಕಸಭಾ ಚುನಾವಣೆಯಲ್ಲಿ ಮಂಡಿಸಿ **2**ನೇ ಅವಧಿಗೆ ಆಶೀರ್ವಾದ ಕೇಳಿದರು.

•ದೇಶದ ಜನತೆ ಮೋದಿಯವರ ಆಡಳಿತದಲ್ಲಿ ಪೂರ್ಣ ವಿಶ್ವಾಸವಿಟ್ಟು **2019** ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷಕ್ಕೆ ಪ್ರಥಮವಾಗಿ **303** ಸ್ಥಾನಗಳನ್ನು ಎನ್ಡಿಎಗೆ **353** ಸ್ಥಾನಗಳನ್ನು ಲೋಕಸಭಾ ಸದಸ್ಯರನ್ನು ನೀಡಿ ಸ್ಥಿರ ಸರ್ಕಾರ ರಚಿಸಲು ಜನತೆ ಮೋದಿಯವರಿಗೆ ಆಶೀರ್ವಾದ ಮಾಡಿದರು. ಕರ್ನಾಟಕದಲ್ಲಿ ಸೋಲಿಲ್ಲದ ಸರದಾರರಾದ ಮಲ್ಲಿಕಾರ್ಜುನ ಖರ್ಗೆಯವರು, ಕೆ.ಹೆಚ್. ಮುನಿಯಪ್ಪ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ. ದೇವೆಗೌಡರಂತಹವರು ಸಹ ಪ್ರಧಾನಿ ನರೇಂದ್ರ ಮೋದಿಯವರ ಅಲೆಯಲ್ಲಿ ಸೋಲನ್ನು ಅನುಭವಿಸಿ, ಕರ್ನಾಟಕದಲ್ಲಿ **28** ಸ್ಥಾನಗಳಲ್ಲಿ **25** ಸ್ಥಾನಗಳು ಗೆಲುವಾಯಿತು. ನರೇಂದ್ರ ಮೋದಿ ಜೀ ಯವರು **2**ನೇ ಅವಧಿಯ ಪ್ರಥಮದಲ್ಲಿ ದೇಶದ ಸುರಕ್ಷತೆ ಹಲವು ದಶಕಗಳಿಂದ ಉಳಿದಿದ್ದ ಸಮಸ್ಯೆಗಳ ಪರಿಹಾರಕ್ಕೆ ದೃಢ ಸಂಕಲ್ಪದ ಘೋಷಣೆ ಮಾಡಿದರು.

ದ್ವಿತೀಯ ಅವಧಿಯ ಆಡಳಿತದ ಪ್ರಾರಂಭದಲ್ಲಿಯೇ ಪ್ರಪಂಚದ ನಾಯಕರಲ್ಲಿ ಅಗ್ರಗಣ್ಯ ನಾಯಕರೆಂಬ ಹೆಸರಿಗೆ ಪಾತ್ರರಾಗಿ ದೇಶದ ಪ್ರತಿಷ್ಠೆಯನ್ನು ಹೆಚ್ಚಿಸಿದ ಕೀರ್ತಿ ಪ್ರಧಾನಿ ನರೇಂದ್ರ ಮೋದಿಯವದಾಗಿದೆ. **2**ನೇ ಅವಧಿಯ ಪ್ರಾರಂಭದಲ್ಲೆ ದೇಶದ ಪ್ರಜಾತಂತ್ರ ವ್ಯವಸ್ಥೆಯ ಚರಿತ್ರೆಯಲ್ಲಿ ಸುವರ್ಣ ಅಧ್ಯಾಯವನ್ನು ಪ್ರಾರಂಭಿಸಿದರು. ಹಲವಾರು ದಶಕಗಳಿಂದ ದೇಶದ ಜನತೆ ನಿರೀಕ್ಷಣೆ ಮಾಡಿದ್ದ ರಾಮ ಮಂದಿರ ನಿರ್ಮಾಣಕ್ಕೆ ಸುಪ್ರೀಂ ಕೋರ್ಟಿನಿಂದ ತೀರ್ಪು ಪಡೆಯುವುದರಲ್ಲಿ ಪ್ರದಾನಿಯವರು ನಡೆಸಿದ ಕಾನೂನು ಸಮರ, ಸಹನೆ ಹಾಗೂ ಚಾಣಕ್ಯ ತಂತ್ರಗಾರಿಕೆಯನ್ನು ದೇಶದ ಜನತೆಯ ಪ್ರಶಂಸಿದ್ದಾರೆ.

ದೇಶದ ಭದ್ರತೆಗಾಗಿ **3** ಸೇನೆಗೆ ಒಬ್ಬರೇ ದಂಡನಾಯಕನನ್ನು ನೇಮಿಸಿದ್ದು ದೇಶದ ರಕ್ಷಣೆಗೆ ನೀಡಿದ ಕೊಡುಗೆ. ಶತ ಶತಮಾನಗಳಿಂದ ಆಚರಣೆಯಲ್ಲಿದ್ದ ತ್ರಿವಳಿ ತಲಾಖ್ ಪದ್ದತಿಯನ್ನು ರದ್ದು ಮಾಡಿ ಮುಸ್ಲಿಂ ಸಮುದಾಯದಲ್ಲಿನ ಹೀನ ಸಂಪ್ರದಾಯಕ್ಕೆ ಮಂಗಳ ಹಾಡಿದರು. ಭಯೋತ್ಪಾದನೆ ನಿಗ್ರಹಕ್ಕೆ ಕಠಿಣ ಕಾಯ್ದೆಯನ್ನು ಜಾರಿ ಮಾಡಿ ಉಗ್ರರ ನಿಗ್ರಹಕ್ಕೆ ಮತ್ತು ಅವರ ಬೆಂಬಲಕ್ಕೆ ಇದ್ದ ಸವಲತ್ತುಗಳನ್ನು ನಿಗ್ರಹ ಮಾಡಿದರು.

ಸಣ್ಣ ಪುಟ್ಟ ಬ್ಯಾಂಕ್ಗಳನ್ನು ಸೇರಿಸಿ ರಾಷ್ಟ್ರೀಕೃತ ಬ್ಯಾಂಕುಗಳೊಂದಿಗೆ ವಿಲೀನ ಮಾಡುವುದರ ಮೂಲಕ ಬ್ಯಾಂಕ್ ಗಳ ಸುಧಾರಣೆ ಮತ್ತು ವಸೂಲಾಗದ ಸಾಲಗಳಿಂದ ಬ್ಯಾಂಕುಗಳಿಗೆ ಮುಕ್ತಿ ಹಾಗೂ ಬ್ಯಾಂಕ್ ಗಳ ಅನಗತ್ಯ ವೆಚ್ಚವನ್ನು ತಗ್ಗಿಸಿದರು. ಕಂದಮ್ಮಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದವರಿಗೆ ಗಲ್ಲು ಶಿಕ್ಷೆ ವಿಧಿಸುವ ಮೂಲಕ ಮಕ್ಕಳ ದೌರ್ಜನ್ಯ ಕಠಿಣ ಕಾಯ್ದೆ ರೂಪಿಸಿದರು.

ದೇಶದ ಏಕತೆಗಾಗಿ ಜಮ್ಮು ಕಾಶ್ಮೀರದ ವಿಶೇಷ ಸ್ಥಾನ ಮಾನದ **370** ನೇ ವಿಧಿಯನ್ನು ರದ್ದುಪಡಿಸಿ, ಜಮ್ಮು ಕಾಶ್ಮೀರದ ಆಡಳಿತವನ್ನು ರಾಷ್ಟ್ರೀಯ ಆಡಳಿತಕ್ಕೆ ಒಳಪಡಿಸಿ ಸರ್ವತೋಮುಖ ಅಭಿವೃದ್ಧಿಗೆ ದಿಟ್ಟ ಹೆಜ್ಜೆಯನ್ನು

ತೆಗೆದುಕೊಂಡ ಉಕ್ಕಿನ ನಾಯಕರು. ವಿದೇಶದಲ್ಲಿ ನೆಲೆ ಇಲ್ಲದ ನಿರಾಶ್ರಿತರಿಗೆ ಆಶ್ರಯ ನೀಡಲು ಸರ್ಕಾರ ಪೌರತ್ವ ತಿದ್ದುಪಡಿ ಕಾಯ್ದೆ (CAA) ಮೂಲಕ ಅಭಯ ಹಸ್ತ ಚಾಚಿದ್ದಾರೆ. ದೇಶದ ವಿಭಜನೆ ಸಂದರ್ಭದಲ್ಲಿ ಭಾರತದಿಂದ ಅನಿವಾರ್ಯವಾಗಿ ನೆರೆ ರಾಷ್ಟ್ರಗಳಿಗೆ ವಲಸೆ ಹೋಗಿ ನಿರಾಶ್ರಿತರಾಗಿ ಭಾರತಕ್ಕೆ ಹಿಂದುರುಗಿದ ಭಾರತೀಯರಿಗೆ ಇದು ಜೀವ ರಕ್ಷಕ ಕಾಯ್ದೆಯಾಗಿದೆ.

ವಾಹನ ಅಪಘಾತ ತಗ್ಗಿಸಲು ಹೊಸ ಮೋಟಾರು ಕಾಯ್ದೆ ಜಾರಿ ಮಾಡಿದರು. ದೇಶದಲ್ಲಿ ಸುಮಾರು 5 ಲಕ್ಷ ಅಪಘಾತಗಳಿಂದ ಸುಮಾರು 1.5 ಲಕ್ಷ ಪ್ರಾಣ ಕಳೆದುಕೊಳ್ಳುತ್ತಿರುವ ವಾಹನ ಚಾಲಕರ ಕುಟುಂಬಕ್ಕೆ ರಕ್ಷಣೆ ಕಾಯ್ದೆಯಾಗಿದೆ. ಈ ಕಾಯ್ದೆಗಳ ಜೊತೆಗೆ ರೈತರ ಮತ್ತು ಸಾಮಾನ್ಯ ಜನರ ಹಾಗೂ ಕೈಗಾರಿಕಾ ಅಭಿವೃದ್ಧಿಗೆ ಹಲವಾರು ಕಾರ್ಯಕ್ರಮಗಳನ್ನು ನೀಡಿದ್ದಾರೆ. ಅವುಗಳಲ್ಲಿ ಕಿಸಾನ್ ಸಮ್ಮಾನ್ ಯೋಜನೆ ರೈತರಿಗೆ 3 ಕಂತುಗಳಲ್ಲಿ ರೈತರಿಗೆ ರೂ. 6000 ಸಹಾಯಧನ, ಅಟಲ್ ಭೂ ಜಲ ಯೋಜನೆ, ಜಲ ಸಂರಕ್ಷಣೆ, ಜಲ ಜೀವನ ಮಿಷನ್ ಯೋಜನೆ ಜಾರಿ ಮಾಡಿದರು. ರೈತರಿಗೆ, ಕಾರ್ಮಿಕರಿಗೆ, ಸಣ್ಣ ಬೀದಿ ವ್ಯಾಪಾರಿಗಳಿಗೆ, ಅಸಂಘಟಿತ ಕಾರ್ಮಿಕ ವರ್ಗಕ್ಕೆ ಪಿಂಚಣಿ ಯೋಜನೆ ಜಾರಿ ಮಾಡಿದ್ದಾರೆ. ದೇಶವನ್ನು ಭ್ರಷ್ಟಾಚಾರ ಮತ್ತು ದುರಾಡಳಿತದಿಂದ ಮುಕ್ತಿಗೊಳಿಸಲು ಕಾರ್ಯಕ್ರಮಗಳನ್ನು ನೀಡಿದ್ದಾರೆ. ದೇಶದ ಆರ್ಥಿಕತೆಯ ಭದ್ರತೆಗೆ ಆರ್ಥಿಕ ಪುನರುಜ್ಜೀವನಕ್ಕೆ ಅನೇಕ ಕಾರ್ಯಕ್ರಮಗಳನ್ನು ನೀಡಿದ್ದಾರೆ.

ಜಾಗತಿಕವಾಗಿ ಸ್ಪರ್ಧಾತ್ಮಕ ಆರ್ಥಿಕತೆ ಸೃಷ್ಟಿಸಲು ಕಾರ್ಪೋರೇಟ್ ತೆರಿಗೆಯಲ್ಲಿ ಭಾರಿ ತೆರಿಗೆ ತಗ್ಗಿಸಲಾಗಿದೆ. ವಲಸಿಗ ಕಾರ್ಮಿಕರ ಅನುಕೂಲಕ್ಕಾಗಿ ಅಂತರರಾಜ್ಯ ಪಡಿತರ ಚೀಟಿ ಪೋರ್ಟೆಬಿಲಿಟಿ ಜಾರಿ ಮಾಡಿ 1 ದೇಶ 1 ರೇಷನ್ ಕಾರ್ಡ್ ಜಾರಿ ಮಾಡಿದರು.ಪ್ರಧಾನಿ ನರೇಂದ್ರ ಮೋದಿಯವರು ಕರ್ನಾಟಕಕ್ಕೆ ಮೊದಲನೇ ವರ್ಷದಲ್ಲಿ ನೀಡಿದ ಕೊಡುಗೆ

ಕೇಂದ್ರೀಯ ಅನುದಾನ ಮತ್ತು ಕೇಂದ್ರದಿಂದ ಬಂದ ಇತರೆ ವರ್ಗಾವಣೆ ಮೊತ್ತ ರೂ.17,249 ಕೋಟಿ.ಪ್ರಾಯೋಜಿತ ಯೋಜನೆಗಳಿಗೆ ಅನುದಾನ ರೂ.10,079 ಕೋಟಿ. ಪ್ರವಾಹ ಪರಿಹಾರಕ್ಕೆ ನೆರವು ರೂ.1,869 ಕೋಟಿ. ರಾಜ್ಯದಲ್ಲಿ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯ ಫಲಾನುಭವಿಗಳು 49,12,445 ಜನರು ಕಲಬುರಗಿ ವಿಮಾನ ನಿಲ್ದಾಣ ಉದ್ಘಾಟನೆ. ಶಿವಮೊಗ್ಗ ವಿಮಾನ ನಿಲ್ದಾಣ ಅಭಿವೃದ್ಧಿ. ಬೆಂಗಳೂರಿನಲ್ಲಿ 148 ಕಿ.ಮೀ ಉದ್ದದ ಉಪನಗರ ರೈಲು ಯೋಜನೆಗೆ ರೂ. 18600 ಕೋಟಿ.ರಾಷ್ಟ್ರೀಯ ಹೆದ್ದಾರಿ ಯೋಜನೆಗೆ ನೆರವು. ಬೆಳಗಾವಿ-ಧಾರವಾಡ, ಮೈಸೂರು-ಕುಶಾಲನಗರ, ಶಿಕಾರಿಪುರ-ರಾಣೆಬೆನ್ನೂರು ರೈಲ್ವೇ ಮಾರ್ಗಕ್ಕೆ ರೂ.3085 ಕೋಟಿ. ಕೋಲಾರದಲ್ಲಿ ರೈಲ್ವೆ ಮಾರ್ಗಕ್ಕೆ ರೂ.485 ಕೋಟಿ ನೆರವು. 2022 ರೊಳಗೆ ಕರ್ನಾಟದಲ್ಲಿ ಎಲ್ಲಾ ರೈಲ್ವೆ ಮಾರ್ಗದ ಡಬ್ಲಿಂಗ್ ಹಾಗೂ ವಿದ್ಯುದೀಕರಣ.

ಕೋವಿಡ್-19 ಕೊರೋನಾ ವೈರಸ್ ಪ್ರಪಂಚದ ಮನುಕುಲವನ್ನೇ ನಡುಗಿಸಿದ ಭಯಂಕರ ಮಹಾಮಾರಿಪ್ರಪಂಚದ ಬಲಿಷ್ಟ ರಾಷ್ಟ್ರಗಳು ಸಹ ಈ ಮಹಾಮಾರಿಯಿಂದ ಅಘಾತಕ್ಕೆ ಈಡಾಗಿವೆ. ಆದರೆ, ನಮ್ಮ ಪ್ರದಾನಿ ಮೋದಿಯವರು ಸಕಾಲದಲ್ಲಿ ತೆಗೆದುಕೊಂಡ ಮುನ್ನಚ್ಚರಿಕೆ ಕ್ರಮವಾಗಿ ದೇಶದ ಜನತೆಯನ್ನು ಮಹಾಮಾರಿಯಿಂದ ಸಾಕಷ್ಟು ರಕ್ಷಣೆ

ನೀಡುವಲ್ಲಿ ಯಶಸ್ವಿಯಾಗಿದ್ದಾರೆ. ವಿಶ್ವ ಸಂಸ್ಥೆಯೂ ಸೇರಿದಂತೆ ಪ್ರಪಂಚದ ಎಲ್ಲಾ ರಾಷ್ಟ್ರಗಳು ಕೋವಿಡ್-19 ಕೊರೋನಾ ವೈರಸ್ ವಿಷಯದಲ್ಲಿ ತೆಗೆದುಕೊಂಡ ಕಾರ್ಯಕ್ಷಮತೆಯನ್ನು ಪ್ರಶಂಸಿಸಿದ್ದಾರೆ.

ಪ್ರಪಂಚದಲ್ಲೇ 2ನೇ ಅತೀ ಹೆಚ್ಚು ಜನಸಂಖ್ಯೆ ಇರುವ ಭಾರತ ದೇಶದ ಜೀವ ಮತ್ತು ಜೀವನವನ್ನು ಸಂರಕ್ಷಣೆ ಮಾಡಿದ ಕೀರ್ತಿ ಪ್ರದಾನಿ ನರೇಂದ್ರ ಮೋದಿಯವರಿಗೆ ಸಲ್ಲುತ್ತದೆ. ದೇಶದ ಜನತೆ ಕೋವಿಡ್-19 ಕೊರೋನಾ ವೈರಸ್ನಿಂದ ಸಿಲುಕಿ ಸಂಕಷ್ಟದಲ್ಲಿದ್ದ ದೇಶದ ಜನತೆಗೆ ಪ್ರಧಾನಿ ನರೇಂದ್ರ ಮೋದಿಯವರು ಆತ್ಮ ನಿರ್ಭರ್ ಭಾರತ್ / ಸ್ವಾವಲಂಭಿ ಭಾರತ ನಿರ್ಮಾಣಕ್ಕಾಗಿ ರೂ. 20.00 ಲಕ್ಷ ಕೋಟಿ ಪ್ಯಾಕೇಜ್ ಅನ್ನು ನೀಡಿ ದೇಶದ ಜನತೆಯ ಕಷ್ಟಕ್ಕೆ ನೆರವಾಗಿದ್ದಾರೆ.

ಇದರಿಂದ ಸುಮಾರು 5.94 ಕೋಟಿ ಜನರಿಗೆ ಉದ್ಯೋಗ ಸೃಷ್ಟಿ, ಅತೀ ಸಣ್ಣ ಮತ್ತು ಸಣ್ಣ ಹಾಗೂ ಮಧ್ಯಮ ಉದ್ಯೋಗಿಗಳಿಗೆ, ರಿಯಲ್ ಎಸ್ಟೇಟ್ ವಲಯ, ವಿದ್ಯುತ್ ವಲಯ, ರೈತರು, ಗ್ರಾಮೀಣಾ ಆರ್ಥಿಕತೆ ಬಲವರ್ಧನೆ, ವಲಸೆ ಕಾರ್ಮಿಕರು, ನಗರದ ಬಡವರು ಹಾಗೂ ಇತರ ಕ್ಷೇತ್ರಗಳ ಆರ್ಥಿಕ ಚಟುವಟಿಕೆಗೆ ಸಹಾಯವಾಗಲಿದೆ.

ಕರ್ನಾಟಕಕ್ಕೆ ಸಂಕಷ್ಟ ಕಾಲದಲ್ಲಿ ಬಡವರ ಹಸಿವು ನೀಗಿಸಲು ಆಹಾರ ವಿತರಣೆಗಾಗಿ 8 ಲಕ್ಷ ಟನ್ ಆಹಾರ ಪದಾರ್ಥಗಳನ್ನು ನೀಡುವ ಮೂಲಕ ರೂ.2,351 ಕೋಟಿ ನೆರವನ್ನು ನೀಡಿದ್ದಾರೆ. ಕರ್ನಾಟಕದಲ್ಲಿ ನಮ್ಮ ಸರ್ಕಾರ ಕೋವಿಡ್-19 ಕೊರೋನಾ ವೈರಸ್ ಮಹಾಮಾರಿಯ ಸಂಕಷ್ಟದಲ್ಲಿರುವ ಜನತೆಗೆ ರೂ.1,610 ಕೋಟಿ ಮತ್ತು ರೂ.662 ಕೋಟಿ ಪ್ಯಾಕೇಜನ್ನು ಶ್ರಮಿಕ ಸಮುದಾಯ, ರೈತರು ಮತ್ತು ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕೆಗಳ ಪುನರುಜ್ಜೀವನಕ್ಕೆ ನೀಡಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಅನೇಕ ಹಿರಿಯ ಸಚಿವರು ಉಪಸ್ಥಿತರಿದ್ದರು.

## Chief Minister's Press Conference

Bengaluru, June 1 (Karnataka Information)

1. Prime Minister Sri Narendra Modi has successfully completed one year of the second term. The country is surging ahead in the path of progress under his exceptional and far-sighted leadership.
2. The Prime Minister is leading the country forward towards development with his Sab Ka Saath, Sab Ka Vikas, principle and inclusive schemes.
3. He is spear heading the cause of building a strong and self reliant Bharath.
4. Through his mantra - Vasudaiva Kutumbakam, he is recognised as an exceptional leader not only in India, but also at the global level.
5. Key decisions taken in the last one year :
• The Termination of the special status to Jammu and Kashmir
• Formation of Jammu- Kashmir and Ladakh as Union Territories

• Finding solution to Ram Mandir issue
• Banning the practice of triple talaq among Muslims
• Vande Bharath Mission
• Amendment to the Citizenship Act
• One Country- One Ration Card scheme
• New Motor Vehicle Act
• Launch of PM Kisan Samman Nidhi
• Monthly pensions to farmers, farm labourers, small shop keepers and workers in the unorganized sectors.
• Anti –terrorism Law and many other bold and historical measures, he is the reason behind the country's development in all spheres.

6. Apart from this, he has also implemented :

• Ayushmaan Bharat scheme
• Pradhan Mantri Garib Kalyan Scheme
• Ujwala Scheme
• Make in India and other pro-people schemes

7. Aathmanirbhar Bharath : Narendra Modi's decision has played a decisive role in dealing with the Covid 19 pandemic in India.
8. He has competently handled a huge challenge of combating the Covid -19 Pandemic in a country with a population of 130 crores
9. He implemented the most stringent lockdown restrictions in the world to control the spread of Covid-19 and achieved remarkable success.
10. India has been noticed globally for the measures it undertook to fight the virus. Leaders from different countries have applauded our proactive action.
11. The Prime Minister was in constant touch with all the Chief Ministers of the country and also held regular video conferences and prepared all of us for the unified fight against Corona Virus.
12. As per the Prime Minister's call to convert challenges into opportunities, the entire nation has declared a war against the Corona pandemic.
13. The ban on the import of PPE kits, ventilators and N 95 masks is a mark of India's self reliance. These equipments are now being produced in the country.
14. Rs. 20 lakh crore package has been announced to revive the economic crisis due to Corona.
15. Welfare Measures: The Government led by Modiji has made great accomplishments in the field of Health, Agriculture, Drinking Water, Information Technology, Education, Space Science etc.
16. The gap between the Cities and the villages has reduced considerably due to the Government's policies.
17. For the first time in India's history, Rs 3000/- monthly pension is being provided to farmers, farm labourers, small shop keepers and workers in the unorganized sectors.
18. Under the able leadership of Sri Narendra Modi, all States in the country is taking giant strides towards the path of development.
19. Karnataka has also put in all efforts to realise the aspirations of our Prime Minister.
20. The State Government has extended its help to people who are affected due to lockdown on account of Covid –19

21. Rs. 1610 crore relief package has been announced to help washer men, barbers, auto and taxi drivers and construction workers.
22. Package has been announced to provide relief to flower/vegetable growers and weavers.
23. Asha health workers who are frontline warriors in the fight against Corona will get Rs. 3000 as incentive.
24. A sum of Rs. 2284 crores will be provided in 3 phases to protect the interest of the people who are in distress due to Corona in the State.
25. Modiji has also supported the State during the devastating floods.
26. Deriving inspiration from our Prime Minister Narendra Modi's efficiency the State Government is determined to develop Karnataka.

## ಜಿ.ಕೆ.ವಿ.ಕೆ ಯಲ್ಲಿ ಅಗ್ರೀವಾರ್ ಘಟಕದಿಂದ ರೈತರಿಂದ ನೇರವಾಗಿ ದ್ರಾಕ್ಷಿ ಮತ್ತು ಮಾವಿನ ಹಣ್ಣು ಮಾರಾಟ

**ಬೆಂಗಳೂರು, ಜೂನ್ 1, 2020 (ಕರ್ನಾಟಕ ವಾರ್ತೆ):**

ಕೋವಿಡ್-19 ಸಮಯದಲ್ಲಿ ರೈತರಿಗೆ ಅನುಕೂಲವಾಗಲು ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಜಿಕೆವಿಕೆ ಮುಖ್ಯದ್ವಾರದಲ್ಲಿರುವ ಕೃಷಿ ತಂತ್ರಜ್ಞಾನ ಮಾಹಿತಿ ಕೇಂದ್ರದಲ್ಲಿ ಯು.ಎ.ಎಸ್.(ಬಿ.) ಅಗ್ರೀವಾರ್ ಘಟಕವು ಕಾರ್ಯನಿರ್ವಹಿಸುತ್ತಿದೆ. ಘಟಕವು ರೈತರಿಗೆ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಸಂಪರ್ಕ ಸೇತುವೆಯಾಗಿ, ರೈತರ ಕೃಷಿ ಸಮಸ್ಯೆಗಳಿಗೆ ಪರಿಹಾರ ಒದಗಿಸುವುದರ ಜೊತೆಗೆ ಬೆಳೆ ಉತ್ಪಾದನಾ ತಾಂತ್ರಿಕತೆಗಳು, ಕೀಟ/ರೋಗ ಮುಂತಾದ ತಾಂತ್ರಿಕ ಮಾಹಿತಿಯನ್ನು ಸಹ ಒದಗಿಸುತ್ತಿದೆ.

ಇಂದು ಜಿ.ಕೆ.ವಿ.ಕೆಯ ಆವರಣದಲ್ಲಿ ದೇವನಹಳ್ಳಿ ತಾಲ್ಲೂಕಿನ ಹಾರೋಹಳ್ಳಿ ಗ್ರಾಮದ ರೈತರಾದ ವೆಂಕಟೇಶ್ ರವರು ದಾಕ್ಷಿ ಮತ್ತು ಶ್ರೀನಿವಾಸಪುರ ತಾಲ್ಲೂಕಿನ, ಕೊಟ್ರಗುಡಿಯ ವೀರಪ್ಪ ರೆಡ್ಡಿ ರವರು ಮಾವಿನಹಣ್ಣು ಮಾರಾಟ ಮಾಡಿದರು. ಈ ಕಾರ್ಯಕ್ರಮವನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ. ಎಸ್. ರಾಜೇಂದ್ರಪ್ರಸಾದ್ ರವರು ಉದ್ಘಾಟಿಸಿದರು. ಸುಮಾರು 2 ಟನ್ ದ್ರಾಕ್ಷಿ ಮತ್ತು 3 ಟನ್ ಮಾವಿನ ಹಣ್ಣನ್ನು ಜಿ.ಕೆ.ವಿ.ಕೆ., ಜಕ್ಕೂರು ಮತ್ತು ಹೆಬ್ಬಾಳದಲ್ಲಿ ಮಾರಾಟದ ವ್ಯವಸ್ಥೆ ಮಾಡಲಾಯಿತು. ಎರಡು ಎಕರೆ ಪ್ರದೇಶದಲ್ಲಿ ಬೆಳೆದಿರುವ ದಾಕ್ಷಿ ಮಾರಾಟ ಮಾಡುವ ಬಗ್ಗೆ ಚಿಂತಿಸುತ್ತಿರುವ ಸಮಯದಲ್ಲಿ ಯು.ಎ.ಎಸ್.(ಬಿ), ಅಗ್ರೀವಾರ್ ಘಟಕಕ್ಕೆ ದೂರವಾಣಿ ಕರೆಮಾಡಿದ ನಂತರ ಕೃಷಿ ವಿಶ್ವವಿದ್ಯಾನಿಲಯದ ವಿಜ್ಞಾನಿಗಳ ತಂಡವು ತೋಟಕ್ಕೆ ಬೇಟಿ ನೀಡಿ ಗುಣಮಟ್ಟ ಪರೀಕ್ಷಿಸಿ ವೈಜ್ಞಾನಿಕ ಸಲಹೆಗಳನ್ನು ನೀಡಿ ಮಾರಾಟ ಮಾಡುವ ವ್ಯವಸ್ಥೆ ಕಲ್ಪಿಸಿದರು. ಈ ವ್ಯವಸ್ಥೆಯನ್ನು ಮುಂದುವರೆಸಿದರೆ ರೈತರಿಗೆ ಅನುಕೂಲವಾಗುತ್ತದೆ ಎಂದು ರೈತರು ಅಭಿಪ್ರಾಯ ಪಟ್ಟರು. ಸಾವಯವ ಕೃಷಿಯಲ್ಲಿ ಬೆಳೆದ ಮಾವಿಗೆ ಮಾರುಕಟ್ಟೆ ಬಗ್ಗೆ ಕೃಷಿ ವಿಶ್ವವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕರಾದ ವೆಂಕಟರೆಡ್ಡಿಯವರ ಜೊತೆಯಲ್ಲಿ ಚರ್ಚಿಸಿದಾಗ ಅವರು ಯು.ಎ.ಎಸ್.(ಬಿ), ಅಗ್ರೀವಾರ್

ಜೊತೆ ಸಂಪರ್ಕಿಸಿ ಮಾರಾಟ ವ್ಯವಸ್ಥೆ ಮಾಡಿರುತ್ತಾರೆ. ಈ ವ್ಯವಸ್ಥೆಯಿಂದ ರೈತರಿಗೆ ಮತ್ತು ಗ್ರಾಹಕರಿಗೆ ಇಬ್ಬರಿಗೂ ಅನುಕೂಲವಾಗುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ದ್ವೇಷ ಭಾಷಣ : ಅರ್ಜಿ ವಜಾಗೊಳಿಸಿದ ಉಚ್ಚನ್ಯಾಯಾಲಯ

**ಬೆಂಗಳೂರು, ಜೂನ್ 1, 2020 (ಕರ್ನಾಟಕ ವಾರ್ತೆ):**

ಕಾನೂನು ಉಲ್ಲಂಘಿಸಿ ನಿರ್ದಿಷ್ಟ ಸಮುದಾಯವನ್ನು ಗುರಿಯಾಗಿಸಿ ದ್ವೇಷ ಭಾಷಣಗಳ ವರದಿಗಳನ್ನು ಪ್ರಸಾರ ಮಾಡುತ್ತಿರುವ ಸುದ್ದಿ ಮಾಧ್ಯಮಗಳು ಹಾಗೂ ಅಂತಹ ಭಾಷಣಗಳನ್ನು ಮಾಡುವ ರಾಜಕೀಯ ನಾಯಕರ ವಿರುದ್ಧ ಕಾನೂನು ಕ್ರಮ ಜರುಗಿಸಲು ಸಂಬಂಧಿತ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಕರ್ನಾಟಕ ಉಚ್ಚ ನ್ಯಾಯಾಲಯ ಇತ್ತೀಚೆಗೆ ವಜಾಗೊಳಿಸಿದೆ.

ದ್ವೇಷ ಭಾಷಣಗಳ ವಿರುದ್ಧ ಜನಾಂದೋಲನ ಸಂಸ್ಥೆ ಹಾಗೂ ಕ್ಯಾಂಪೇನ್ ಎಗೇಂನ್ಸ್ ಹೇಟ್ ಸ್ಪೀಚ್ ( **CAMPAIGN AGAINIST HATE SPEECH**) ಎ. ಆರ್. ವಾಸವಿ ಮತ್ತು ಸ್ವಾತಿ ಶೇಷಾದ್ರಿ ಎಂಬುವವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಈ ಸಂಬಂಧ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸಿದ್ದರು.

ದ್ವೇಷ ಭಾಷಣಗಳ ವಿರುದ್ಧ ಸಮರ ಸಾರಿರುವ ಜನಾಂದೋಲನ ಸಂಸ್ಥೆಯು ವಕೀಲರು, ಶಿಕ್ಷಣ ತಜ್ಞರು ಸೇರಿದಂತೆ ವಿವಿಧ ವೃತ್ತಿಪರರನ್ನು ಒಳಗೊಂಡ ನೋಂದಣಿಯಾಗದ ಸಂಸ್ಥೆಯಾಗಿದ್ದು ರಾಜ್ಯ ಸರ್ಕಾರ, ಗೃಹ ಇಲಾಖೆ, ಕೇಂದ್ರ ಸರ್ಕಾರದ ವಾರ್ತಾ ಮತ್ತು ಪ್ರಸಾರ ಮಂತ್ರಾಲಯ, ರಾಷ್ಟ್ರೀಯ ಮತ್ತು ರಾಜ್ಯ ಮಾನ್ವ ಹಕ್ಕುಗಳ ಆಯೋಗ ಹಾಗೂ ರಾಜ್ಯ ಅಲ್ಪಸಂಖ್ಯಾತರ ಆಯೋಗ ಸೇರಿದಂತೆ 11 ಸಂಸ್ಥೆಗಳನ್ನು ಪ್ರತಿವಾದಿಯಾಗಿ ಮಾಡಿತ್ತು.

ಕಾನೂನು ಉಲ್ಲಂಘಿಸಿ ರಾಜಕಾರಣಿಗಳು ನಿರ್ದಿಷ್ಟ ಸಮುದಾಯದ ವಿರುದ್ಧ ದ್ವೇಷ ಭಾಷಣಗಳನ್ನು ಮಾಡುತ್ತಿದ್ದಾರೆ. ಕೇಬಲ್ ಟೆಲಿವಿಷನ್ ನೆಟ್ವರ್ಕ್ (ರೆಗ್ಯುಲೇಷನ್) ಆಕ್ಟ್ 1995 ನ್ನು ಉಲ್ಲಂಘಿಸಿ ಟೆಲಿವಿಷನ್ ಮಾಧ್ಯಮಗಳು ದ್ವೇಷದ ಭಾಷಣಗಳ ವಿಡಿಯೋಗಳನ್ನು ಪ್ರಸಾರ ಮಾಡುತ್ತಿವೆ. ಇದರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಸಂವಿಧಾನದ ವಿಧಿ 226 ರ ಅಡಿಯಲ್ಲಿ ಅರ್ಜಿ ಸಲ್ಲಿಸಿ ಸಂಬಂಧಿತ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಅರ್ಜಿದಾರರು ನ್ಯಾಯಾಲಯಕ್ಕೆ ಮನವಿ ಮಾಡಿದ್ದರು.

ಈ ಅರ್ಜಿಯು ನ್ಯಾಯಮೂರ್ತಿಗಳಾದ ಬಿ. ವಿ. ನಾಗರತ್ನ ಹಾಗೂ ನ್ಯಾಯಮೂರ್ತಿ ಎಂ.ಜಿ. ಉಮಾ ಅವರಿದ್ದ ಪೀಠದ ಮುಂದೆ ವಿಚಾರಣೆಗೆ ಬಂದಿತ್ತು.

ಈ ಕುರಿತು ವಾದ ಮತ್ತು ಪ್ರತಿವಾದಗಳನ್ನು ಆಲಿಸಿದ ನ್ಯಾಯಾಲಯ, ಪ್ರಸ್ತುತ ಸಂದರ್ಭದಲ್ಲಿ "ದ್ವೇಷ ಭಾಷಣ" ಎಂಬ ಪರಿಕಲ್ಪನೆಯ ಕುರಿತು ಶಾಸನ ರಚಿಸುವು ಸೂಕ್ತವೆಂದು ಸಂಸತ್ತು ಇನ್ನೂ ಯೋಚಿಸಿಲ್ಲ. ದ್ವೇಷ

ಭಾಷಣ ಕುರಿತು  ಯಾವುದೇ ವ್ಯಾಖ್ಯಾನವೇ ಇಲ್ಲದಿರುವುದಾಗ ಕೇವಲ ಸಮಾಜದ ಒಂದು ವರ್ಗಕ್ಕೆ ಅಥವಾ ಸಾಮಾನ್ಯವಾಗಿ ಸಮಾಜದ ಮೇಲೆ ಪರಿಣಾಮ ಉಂಟಾಗುತ್ತದೆ ಎಂಬ ಆಧಾರದಲ್ಲಿ ಸಂವಿಧಾನದ ವಿಧಿ 226 ರ ಅಡಿ ನಿರ್ದೇಶನ ನೀಡಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಹೇಳಿತು. ಮುಂದುವರೆದು ಈ ವಿಚಾರದಲ್ಲಿ ರಾಜ್ಯ ಶಾಸನಸಭೆ ಅಥವಾ ಸಂಸತ್ತಿಗೆ ನಿರ್ದೇಶನ ನೀಡುವುದು ಸೂಕ್ತವಲ್ಲ ಎಂದು ಅಭಿಪ್ರಾಯಪಟ್ಟ ನ್ಯಾಯಾಲಯ ಅರ್ಜಿಯನ್ನು ವಜಾಗೊಳಿಸಿ ತೀರ್ಪು ನೀಡಿತು.

ನ್ಯಾಯಾಲಯದಲ್ಲಿ ಸಹಾಯಕ ಅಡ್ವೋಕೇಟ್ ಜನರಲ್ ಆರ್ ಸುಬ್ರಮಣ್ಯ ಹಾಗೂ ಟಿ.ಎಲ್. ಕಿರಣ್ ಕುಮಾರ್ ಸರ್ಕಾರದ ಪರವಾಗಿ ವಾದ ಮಂಡಿಸಿದರು ಎಂದು ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಜೂನ್ 1, 2020 (ಕರ್ನಾಟಕ ವಾರ್ತೆ):**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವ ಎಸ್. ಸುರೇಶ್‌ಕುಮಾರ್ ಅವರು  ಜೂನ್ 2 ಮತ್ತು 3 ರಂದು ಧಾರವಾಡ, ಬೆಳಗಾವಿ ಮತ್ತು ಬಾಗಲಕೋಟೆ ಜಿಲ್ಲೆಗಳ ಪ್ರವಾಸ ಕೈಗೊಂಡು ಜೂನ್ 3 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಜೂನ್ 1, 2020 (ಕರ್ನಾಟಕ ವಾರ್ತೆ):**

ಕಂದಾಯ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಆರ್. ಅಶೋಕ್ ಅವರು ಜೂನ್ 3  ಹಾಗೂ 4 ರಂದು ರಾಮನಗರ, ಚಾಮರಾಜನಗರ ಹಾಗೂ ಕೊಡಗು ಜಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಜೂನ್ 4 ರ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಗಮವಾಗಿ ನಡೆಸಲು ಕ್ರಮ

**ಬೆಂಗಳೂರು, ಜೂನ್ 1, 2020 (ಕರ್ನಾಟಕ ವಾರ್ತೆ):**

ಇದೇ ಮೊದಲ ಬಾರಿ ಕೊರೋನಾ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ತಡವಾಗಿ ನಡೆಯುತ್ತಿರುವ ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಗಮವಾಗಿ ಮತ್ತು ಸಮರ್ಪಕ ನಿರ್ವಹಣೆಗೆ ವಿಶೇಷವಾಗಿ ಗೃಹ ಮತ್ತು ಆರೋಗ್ಯ

**ಇಲಾಖೆಗಳ ಹೆಚ್ಚಿನ ಸಹಾಯ-ಸಹಕಾರಗಳೊಂದಿಗೆ ಸಾರ್ವಜನಿಕ ಶಿಕ್ಷಣ ಇಲಾಖೆ ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಹೇಳಿದ್ದಾರೆ.**

ಜೂ. 25ರಿಂದ ನಡೆಯುತ್ತಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳ ಸುಗಮ ನಿರ್ವಹಣೆ ಹಿನ್ನೆಲೆಯಲ್ಲಿ ಸುರಕ್ಷತಾ ಕ್ರಮಗಳ ಕುರಿತು ವಿಧಾನಸೌಧದಲ್ಲಿ ಗೃಹ ಸಚಿವ ಬೊಮ್ಮಾಯಿಯವ ನೇತೃತ್ವದಲ್ಲಿ ಗೃಹ ಮತ್ತು ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರ ಸಭೆಯಲ್ಲಿ ಮಾತನಾಡಿದ ಅವರು, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಇಡೀ ನಾಡಿನ ಮಕ್ಕಳಿಗೆ ಬೇಕಾಗಿದ್ದು, ಅವರ ಹಿತದೃಷ್ಟಿಯಿಂದ ಪರೀಕ್ಷೆ ನಡೆಸಲು ಎಲ್ಲ ಕ್ರಮ ಕೈಗೊಳ್ಳಲಾಗಿದೆ ಎಂದರು.
ನಾಡಿನ ಮಕ್ಕಳ ಹಿತದೃಷ್ಟಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಬೇಕೆನ್ನುವುದನ್ನು ರಾಜ್ಯದ ಘನ ಉಚ್ಚ ನ್ಯಾಯಾಲಯವೂ ಪುರಸ್ಕರಿಸಿದೆ. ಆದರೆ ಈ ಬಾರಿಯ ಪರೀಕ್ಷೆ ಬೇಕು-ಬೇಡ ಎಂಬ ಕೆಲ ಮನಸ್ಥಿತಿಗಳ ಮಧ್ಯೆ ನ್ಯಾಯಾಲಯವೂ ಈ ಕುರಿತು ಕಣ್ಗಾವಲು ನಡೆಸುತ್ತಿದ್ದು, ಅದಕ್ಕಾಗಿ ಗೃಹ ಇಲಾಖೆಯ ಹೆಚ್ಚಿನ ಸಹಾಯ ಸಹಕಾರದ ಅಗತ್ಯವಿದೆ ಎಂದು ಗೃಹ ಸಚಿವರಲ್ಲಿ ಮನವಿ ಮಾಡಿದರು.
ಕೊರೋನಾದಂತಹ ಸಾಂಕ್ರಾಮಿಕ ರೋಗದಿಂದಾಗಿ ತಡವಾಗಿ ನಡೆಯುತ್ತಿರುವ ಈ ಬಾರಿಯ ಪರೀಕ್ಷೆಯ ಸುಗಮ ನಿರ್ವಹಣೆ ಮತ್ತು ಪರೀಕ್ಷೆಯ ಪಾವಿತ್ರ್ಯ ಕಾಪಾಡುವ ಹಿನ್ನೆಲೆಯಲ್ಲಿ ಗೃಹ ಇಲಾಖೆಯ ಸಹಕಾರ ಈ ಬಾರಿ ಎಂದಿಗಿಂತ ಹೆಚ್ಚಾಗಿದೆ ಎಂದು ಅಭಿಪ್ರಾಯಪಟ್ಟ ಸುರೇಶ್‌ಕುಮಾರ್, ಕೊರೋನಾ ಹಿನ್ನೆಲೆಯಲ್ಲಿ ವಿಶೇಷವಾಗಿ ಇಲಾಖೆ ಕೈಗೊಂಡ ಕ್ರಮಗಳು ಮತ್ತು ಗೃಹ ಇಲಾಖೆ ಯಾವ ಯಾವ ಹಂತದಲ್ಲಿ ಕೈಗೊಳ್ಳಬೇಕಾಗಿರುವ ಕ್ರಮಗಳ ಕುರಿತು ವಿವರಿಸಿದರು.

**ಗೃಹ ಇಲಾಖೆಯಿಂದ ವಿಶೇಷ ಕಟ್ಟುನಿಟ್ಟಿನ ಕ್ರಮಗಳು-ಬೊಮ್ಮಾಯಿ:**
ಗೃಹ ಸಚಿವ ಬಸವರಾಜ ಎಸ್. ಬೊಮ್ಮಾಯಿ ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಸುವುದು ಶಿಕ್ಷಣ ಇಲಾಖೆ ಜವಾಬ್ದಾರಿಯಾಗಿದ್ದರೂ ಈ ಬಾರಿಯ ಪರೀಕ್ಷೆ ಸುಸೂತ್ರವಾಗಿ ನಡೆಯುವ ನಿಟ್ಟಿನಲ್ಲಿ ಗೃಹ ಇಲಾಖೆ ಎಲ್ಲ ರೀತಿಯ ವಿಶೇಷ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಿದೆ ಎಂದರು.
ಎಸ್‌ಎಸ್‌ಎಲ್‌ಸಿ ಪರೀಕ್ಷೆ ತಡವಾಗಿ ನಡೆಯುತ್ತಿರಬಹುದು. ಆದರೆ ರಾಜ್ಯದ 8.5 ಲಕ್ಷಕ್ಕೂ ಹೆಚ್ಚಿನ ಮಕ್ಕಳು ಯಾವುದೇ ರೀತಿಯಲ್ಲಿ ಆತ್ಮವಿಶ್ವಾಸ ಕಳೆದುಕೊಳ್ಳದಂತೆ ಮಾಡುವ ನಿಟ್ಟಿನಲ್ಲಿ ಕಳೆದ ಮೂರು ತಿಂಗಳಿನಿಂದಲೂ ಶಾಲಾ ಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ನೇತೃತ್ವದಲ್ಲಿ ಇಡೀ ಶಿಕ್ಷಣ ಇಲಾಖೆ ಕೈಗೊಂಡ ಕ್ರಮಗಳನ್ನು ಗಮನಿಸದ್ದೇನೆ. ಇದು ನಿಜಕ್ಕೂ ಅತ್ಯಂತ ಶ್ಲಾಘನೀಯ ಕಾರ್ಯವಾಗಿದ್ದು, ಈ

ಬಾರಿಯ ಪರೀಕ್ಷೆಗೆ ಮತ್ತು ಯಾವೊಬ್ಬ ವಿದ್ಯಾರ್ಥಿಗೂ ತೊಂದರೆಯಾಗದಂತೆ ಅಗತ್ಯ ಗಮನ ಹರಿಸಲಾಗುವುದು ಎಂದು ಸಚಿವ ಬೊಮ್ಮಾಯಿ ಹೇಳಿದರು.

ಕೆಲ ಸಂಘಟನೆಗಳು ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮಾಡಬಾರದು ಎಂದು ಸರ್ಕಾರಕ್ಕೆ ಅರ್ಜಿ ಕೊಟ್ಟಿದ್ದವು. ಕೆಲವರು ನ್ಯಾಯಾಲಯಕ್ಕೂ ಹೋಗಿದ್ದರು. ಆದರೆ ಘನ ಉಚ್ಚ ನ್ಯಾಯಾಲಯವು ಮಕ್ಕಳ ಹಿತದೃಷ್ಟಿಯಿಂದ ಪರೀಕ್ಷೆ ನಡೆಸುವುದನ್ನು ಪುರಸ್ಕರಿಸಿರುವುದರೊಂದಿಗೆ, ಪರೀಕ್ಷೆಯನ್ನು ಮಕ್ಕಳ ಆರೋಗ್ಯ, ರಕ್ಷಣೆ, ಸಾರಿಗೆ, ಸಾಗಣೆ ಸೇರಿದಂತೆ ಯಾವುದೇ ರೀತಿಯಲ್ಲಿ ತೊಂದರೆಯಾದಂತೆ ಎಲ್ಲ ಕ್ರಮಗಳನ್ನು ಕೈಗೊಳ್ಳಬೇಕೆಂದು ಆದೇಶ ಮಾಡಿರುವುದರಿಂದ ಇದರಲ್ಲಿ ಗೃಹ ಇಲಾಖೆಯ ಜವಾಬ್ದಾರಿಯೂ ಹಿರಿದಾಗಿದ್ದು, ಪರೀಕ್ಷೆಯ ಸುಗಮ ನಿರ್ವಹಣೆಗೆ ಇಲಾಖೆ ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಬೊಮ್ಮಾಯಿ ಹೇಳಿದರು. ಹಾಗೆಯೇ ಈ ಕುರಿತು ಇಲಾಖೆಯಿಂದ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಆದೇಶ ಹೊರಡಿಸಬೇಕು ಮತ್ತು ಪರೀಕ್ಷೆ ಕುರಿತು ಹೆಚ್ಚಿನ ಆಸ್ಥೆ ಮತ್ತು ಜವಾಬ್ದಾರಿಯಿಂದ ಕೆಲಸ ಮಾಡಬೇಕೆಂದು ತಮ್ಮ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇಡೀ ನಾಡಿನ ಮಕ್ಕಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲು ಉತ್ಸುಕರಾಗಿದ್ದಾರೆ. ಪರೀಕ್ಷೆ ಬೇಡ ಎಂದು ಯಾವೊಬ್ಬ ಮಗುವೂ ಹೇಳಿಲ್ಲ. ಇದು ಮಕ್ಕಳು ಮತ್ತು ಪರೀಕ್ಷಾ ಮಂಡಳಿಯ ಮಧ್ಯದ ವಿಷಯ ಮಾತ್ರ. ಈ ಬಾರಿ ಕೆಲ ಮನಸ್ಸುಗಳು ಪರೀಕ್ಷೆಯನ್ನು ಈ ಪರೀಕ್ಷೆ ನಡೆಸುವುದು ಬೇಡ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಿರುವ ಹಿನ್ನೆಲೆ ಘನ ಉಚ್ಚ ನ್ಯಾಯಾಲಯದ ಆದೇಶ ಪಾಲನೆ ಈ ಬಾರಿಯ ಪರೀಕ್ಷೆಯ ಸುಗಮ ನಿರ್ವಹಣೆಗೆ ಎಲ್ಲ ರೀತಿಯ ಕ್ರಮಗಳನ್ನು ಗೃಹ ಇಲಾಖೆ ಕೈಗೊಳ್ಳಲಿದೆ ಎಂದು ಸಚಿವರು ಹೇಳಿದರು.

ಗಡಿ ರಾಜ್ಯದಿಂದ ಬರುವ ಮಕ್ಕಳು ಪರೀಕ್ಷೆಗೆ ಹಾಜರಾಗುವಂತೆ ಮಾಡುವುದರಿಂದ ಹಿಡಿದು ಪರೀಕ್ಷಾ ಕೇಂದ್ರಗಳು, ಪ್ರಶ್ನೆ ಪತ್ರಿಕೆ ಸಂಗ್ರಹಿಸಿಡಲಾದ ತಾಲೂಕು, ಜಿಲ್ಲಾ ಖಜಾನೆಗಳು, ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆಗಳ ರವಾನೆ, ಮತ್ತು ಪರೀಕ್ಷಾ ಕೇಂದ್ರದ ಬಳಿಯ ಆರೋಗ್ಯ ತಪಾಸಣಾ ಕೇಂದ್ರ, ಪರೀಕ್ಷಾ ಕೇಂದ್ರಕ್ಕೆ ಮಕ್ಕಳನ್ನು ಸಾಗಿಸುವ ವಾಹನ ಸೇರಿದಂತೆ ಅಗತ್ಯವಿದ್ದೆಡೆಯಲ್ಲೆಲ್ಲಾ ನಮ್ಮ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದು ಪರೀಕ್ಷಾ ಕಾರ್ಯದ ಸುಗಮ ನಿರ್ವಹಣೆಗೆ ಶ್ರಮಿಸಲಿದ್ದಾರೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

ಇನ್ನೂ ಸಮಯವಿರುವುದರಿಂದ ಪರೀಕ್ಷೆಗಿಂತ ಒಂದು ವಾರದ ಮೊದಲೇ ಸ್ಥಳೀಯ ಆರೋಗ್ಯ ಇಲಾಖೆ ಅಧಿಕಾರಿಗಳು ಮಕ್ಕಳನ್ನು ಆಯಾ ಮಟ್ಟದಲ್ಲೇ ಆರೋಗ್ಯ ತಪಾಸಣೆ ಮಾಡುವುದರಿಂದ ಮಕ್ಕಳಲ್ಲಿ ತಮ್ಮ

ಸುರಕ್ಷತೆ ಕುರಿತು ಸರ್ಕಾರ ಕೈಗೊಳ್ಳುತ್ತಿರುವ ಉಪಕ್ರಮಗಳ ಹಿನ್ನೆಲೆಯಲ್ಲಿ ಆತ್ಮವಿಶ್ವಾಸ ಮೂಡಿಸಲಿರುವುದರಿಂದ ಈ ಕುರಿತಂತೆ ಗಮನ ಹರಿಸುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸಲಹೆ ನೀಡಿದರು

ಸಭೆಯಲ್ಲಿ ಗೃಹ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಜನೀಶ ಗೋಯಲ್, ಅಪರ ಪೊಲೀಸ್ ಮಹಾನಿರ್ದೇಶಕ (ಕಾನೂನು ಮತ್ತು ಸುವ್ಯವಸ್ಥೆ) ಅಮರ್‍ಕುಮಾರ್ ಪಾಂಡೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಎಸ್.ಆರ್. ಉಮಾಶಂಕರ್, ಸಾಶಿಇ ಆಯುಕ್ತ ಡಾ. ಕೆ.ಜಿ.ಜಗದೀಶ್, ಎಸ್‍ಎಸ್‍ಎ ಎಸ್‍ಪಿಡಿ ಡಾ. ಎಂ.ಟಿ. ರೇಜು, ಸಿಒಡಿ ಅಧಿಕಾರಿಗಳು, ಗೃಹ ಮತ್ತು ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

Dr. Vishnukant S. Chatpalli appointed as Vice Chancellor, Rani Channamma University

Bengaluru, June 1 (Karnataka Information)

Dr. Vishnukant S. Chatpalli, Professor, Rani Channamma University, Belagavi appointed as the Vice Chancellor of the Karnataka State Rural Development and Panchyat Raj University, Gadag, says official press release.

**ಪಿ.ಯು.ಸಿ. ಪರೀಕ್ಷೆ ಸನಿಹವಾಗುವ ಪರೀಕ್ಷಾ ಕೇಂದ್ರಗಳಲ್ಲೇ ಪರೀಕ್ಷೆ ಬರೆಯಲು ಅವಕಾಶ**

**ಬೆಂಗಳೂರು, ಜೂನ್ 1, 2020 (ಕರ್ನಾಟಕ ವಾರ್ತೆ):**

ಜೂನ್ 18ರಂದು ನಡೆಯಲಿರುವ ಪಿಯುಸಿ ಇಂಗ್ಲಿಷ್ ಪತ್ರಿಕೆಯ ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿನಿಲಯವಾಸಿಯಾಗಿದ್ದ ವಿದ್ಯಾರ್ಥಿಗಳು ಮತ್ತು ವಲಸೆ ಕಾರ್ಮಿಕರ ಮಕ್ಕಳಿಗೆ ಕೊರೋನಾ ಹಿನ್ನೆಲೆಯಲ್ಲಿ ತಮಗೆ ಸನಿಹವಾಗುವ ಪರೀಕ್ಷಾ ಕೇಂದ್ರಗಳಲ್ಲೇ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಹೇಳಿದ್ದಾರೆ.

ವಿದ್ಯಾರ್ಥಿನಿಲಯ ವಾಸಿಗಳು ಮತ್ತು ವಲಸೆ ಕಾರ್ಮಿಕರ ಮಕ್ಕಳು ಲಾಕ್‍ಡೌನ್‍ನಿಂದಾಗಿ ತಮ್ಮತಮ್ಮ ಸ್ವಂತ ಸ್ಥಳಗಳಿಗೆ ತೆರಳಿರುವ ಹಿನ್ನೆಲೆಯಲ್ಲಿ ಅವರಿರುವ ಸ್ಥಳದ ಸಮೀಪದ ಜಿಲ್ಲೆಯ, ತಾಲೂಕಿನ ಅವರು ಬಯಸುವ ಪರೀಕ್ಷಾ ಕೇಂದ್ರಗಳಲ್ಲೇ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ. ಅದರಲ್ಲಿ 16229 ವಿದ್ಯಾರ್ಥಿಗಳು ಪ್ರಸ್ತುತ ತಾವಿರುವ ಸಮೀಪದ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲು ಇಚ್ಛೆ ವ್ಯಕ್ತಪಡಿಸಿದ್ದು, ಅದರಂತೆ ಪರೀಕ್ಷಾ ಕೇಂದ್ರಗಳನ್ನು

ನಿಗದಿಪಡಿಸಲಾಗುವ ಪ್ರಕ್ರಿಯೆ ನಡೆಯುತ್ತಿದ್ದು, ಇವರಿಗೆ ನಿಗದಿಪಡಿಸಲಾದ ಪರೀಕ್ಷಾ ಕೇಂದ್ರಗಳ ವಿವರಗಳನ್ನು ಶೀಘ್ರದಲ್ಲೆ ಪಿಯು ಮಂಡಳಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಹಾಗೆಯೇ ರಾಜ್ಯದಲ್ಲಿ ಪಿಯು ವ್ಯಾಸಂಗ ಮಾಡುತ್ತಿದ್ದ ಹೊರ ರಾಜ್ಯದ ವಿದ್ಯಾರ್ಥಿಗಳು ತಮ್ಮ ಊರಿಗೆ ತೆರಳಿದ್ದು, ಅವರ ಇಚ್ಛೆಯಿಂತೆ ಆ ರಾಜ್ಯದ ಗಡಿ ಭಾಗದ ನಮ್ಮ ರಾಜ್ಯದ ಜಿಲ್ಲೆಗಳಲ್ಲಿ ಪರೀಕ್ಷೆ ಬರೆಯಬಹುದಾಗಿದೆ. ವಿಶೇಷವಾಗಿ ಕಾಸರಗೋಡಿನ ಗಡಿ ಭಾಗದಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರೀಕ್ಷೆಗೆ ಹಾಜರಾಗಲಿರುವ ವಿದ್ಯಾರ್ಥಿಗಳಿಗೆ ಗಡಿಭಾಗದಿಂದ ಪರೀಕ್ಷಾ ಕೇಂದ್ರಕ್ಕೆ ಮತ್ತು ಪರೀಕ್ಷೆ ಸಮಯದ ನಂತರ ಗಡಿ ಭಾಗದವರೆಗೆ ಬಸ್ ವ್ಯವಸ್ಥೆ ಮಾಡಲು ದಕ್ಷಿಣ ಕನ್ನಡ ಜಿಲ್ಲಾ ಪಿಯು ಉಪನಿರ್ದೇಶಕರಿಗೆ ಸೂಚನೆ ನೀಡಲಾಗಿದೆ ಎಂದು ಸುರೇಶ್‌ಕುಮಾರ್ ತಿಳಿಸಿದ್ದಾರೆ.